#ಯುನೈಟೆಡ್ ಬೆಂಗಳೂರು

ಗೆ,

ದಿನಾಂಕ–26–06–2019

ಅಪರ ನಿಬಂಧಕರು, ವಿಚಾರಣೆಗಳು–1
ಮಾನ್ಯ ಲೋಕಾಯುಕ್ತ ಕಛೇರಿ
ಎಂ.ಎಸ್.ಬಿಲ್ಡಿಂಗ್, ಡಾ. ಬಿ.ಆರ್ ಅಂಬೇಡ್ಕರ್ ವೀದಿ, ಬೆಂಗಳೂರು–560001

ಮಾನ್ಯರೇ,

ವಿಷಯ : **ಮಲ್ಲಸಂದ್ರ ಗುಡ್ಡೆ ಕೆರೆ**ಯ ಬಗ್ಗೆ ಸ್ಥಿತಿಗತಿ ವರದಿ ಸಲ್ಲಿಕೆ

ಉಲ್ಲೇಖ : ಮಾನ್ಯ ಲೋಕಾಯುಕ್ತರ ಆದೇಶ ಸಂಖ್ಯೆ Comp/Lok/BCD-2527/2018

ಕಂದಾಯ ಇಲಾಖಾ ದಾಖಲೆಗಳ ಪ್ರಕಾರ ಮಲ್ಲಸಂದ್ರ ಗುಡ್ಡೆ ಕೆರೆಯು ಬೆಂಗಳೂರು ಉತ್ತರ ತಾಲ್ಲೂಕು, ಯಶವಂತಪುರ ಹೋಬಳಿ, ಮಲ್ಲಸಂದ್ರ ಗ್ರಾಮದ ಸರ್ವೇ ನಂ 49 ಮತ್ತು 50 ರಲ್ಲಿ, ಒಟ್ಟು 17 ಎಕರೆ 11 ಗುಂಟೆ ವಿಸ್ತೀರ್ಣವನ್ನು ಹೊಂದಿದೆ.

ಈ ಕೆರೆಯಲ್ಲಿ ಕೆಲವು ಸಮಸ್ಯೆಗಳಿದ್ದು, ಅವುಗಳನ್ನು ತಮ್ಮ ಗಮನಕ್ಕೆ ಈ ಕೆಳಗಿನಂತೆ ತಿಳಿಸಲಾಗಿದೆ.

1. ಮಾನ್ಯ ಲೋಕಾಯುಕ್ತರು ಈ ಕೆರೆಯಲ್ಲಿರುವ ಒತ್ತುವರಿಯನ್ನು ಗುರುತು ಮಾಡಿ ತೆರವು ಮಾಡಲು ಭೂದಾಖಲೆಗಳ ಜಂಟಿ ನಿರ್ದೇಶಕರಿಗೆ ನೀಡಿದ ಆದೇಶದಂತೆ 12–10–2018ರಂದು ಸರ್ವೇ ಮಾಡಲಾಗಿರುತ್ತದೆ ಹಾಗೂ ಸರ್ವೇಕಾರ್ಯ ಮುಗಿದು ಇಂದಿಗೆ 8 ತಿಂಗಳುಗಳು ಕಳೆದಿರುತ್ತವೆ. ಸರ್ವೇ ವರದಿಯನ್ನು ಭೂದಾಖಲೆಗಳ ಜಂಟಿ ನಿರ್ದೇಶಕರು ತಮಗೆ ಸಲ್ಲಿಸಿದ್ದು, ವರದಿಯಲ್ಲಿ ತಿಳಿಸಿರುವ ಒತ್ತುವರಿಯನ್ನು ತೆರವುಗೊಳಿಸಲು ತಹಶೀಲ್ದಾರ್, ಬೆಂಗಳೂರು ಉತ್ತರ ತಾಲ್ಲೂಕು ಮತ್ತು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಬೇಕಾಗಿ ಹಾಗೂ ಕರ್ನಾಟಕ ಭೂ ಕಂದಾಯ ಕಾಯಿದೆ 1964, ಸೆಕ್ಷನ್ 192 ಎ ಮತ್ತು ಬಿ ಪ್ರಕಾರ(ಪ್ರತಿಗಳನ್ನು ಲಗತ್ತಿಸಲಾಗಿದೆ) ಒತ್ತುವರಿದಾರರಿಗೆ ಮತ್ತು ಒತ್ತುವರಿ ಮಾಡಲು ಪ್ರತ್ಯಕ್ಷವಾಗಿ ಮತ್ತು ಪರೋಕ್ಷವಾಗಿ ಸಹಕಾರ ನೀಡಿದ ಎಲ್ಲಾ ಅಧಿಕಾರಿಗಳಿಗೆ ಶಿಕ್ಷೆ ವಿಧಿಸಬೇಕಾಗಿ ತಮ್ಮಲ್ಲಿ ಕಳಕಳಿಯಾಗಿ ವಿನಂತಿಸುತ್ತೇವೆ.

2. ಈ ಕೆರೆಗೆ ಎಲ್ಲಾ ತರಹದ ತ್ಯಾಜ್ಯವನ್ನು ಸುರಿಯಲಾಗುತ್ತಿದೆ ಮತ್ತು ಬಿಬಿಎಂಪಿಯ ಪ್ರಾಥಮಿಕ ತ್ಯಾಜ್ಯ ಸಂಗ್ರಹಣೆಯನ್ನು ಕೆರೆಯ ಅಂಚಿನಲ್ಲಿಯೇ ಮಾಡುತ್ತಿದ್ದು, ಕೆರೆಯು ಇನ್ನಷ್ಟು ಕಲುಶಿತವಾಗುತ್ತಿದೆ. ಇದನ್ನು ತಡೆಗಟ್ಟಲು ಬಿಬಿಎಂಪಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕಾಗಿ ವಿನಂತಿಸುತ್ತೇವೆ.

3. ಕೆರೆಗೆ ಸಂಪೂರ್ಣ ಬೇಲಿ ಹಾಕಿರುವುದಿಲ್ಲ. ಹಾಗಾಗಿ ಕೆರೆಗೆ ತಂತಿ ಬೇಲಿಯನ್ನು ಹಾಕಲು ಬಿಬಿಎಂಪಿ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕಾಗಿ ವಿನಂತಿಸುತ್ತೇವೆ.

ಈ ಮೇಲಿನ ಸಮಸ್ಯೆಗಳನ್ನು ಶೀಘ್ರ ಪರಿಹರಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳಿಗೆ ತಾವು ಆದೇಶ ನೀಡಬೇಕೆಂದು ತಮ್ಮಲ್ಲಿ ವಿನಂತಿಸಿಕೊಳ್ಳುತ್ತೇವೆ.

ಧನ್ಯವಾದಗಳೊಂದಿಗೆ,

ಇಂತಿ ತಮ್ಮ ವಿಶ್ವಾಸಿ

ಎನ್ ಆರ್ ಸುರೇಶ್, ಸಂಚಾಲಕರು, ಯುನೈಟೆಡ್ ಬೆಂಗಳೂರು